# ಕರ್ನಾಟಕ ಸರ್ಕಾರದ ನಡಾವಳಿ

**ವಿಷಯ** ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸುವ ಬಗ್ಗೆ - ಆದೇಶ.

**ಓದಲಾಗಿದೆ:**

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ,ಬೆಂಗಳೂರು, ಇವರ ಅ.ಸ.ಪ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಎಂವೈಎಸ್-1087/2013/ಡಿಆರ್‌ಇ-4, ದಿನಾಂಕ:04/11/2016.
2. ಮಾನ್ಯ ಉಪಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ ಎಂವೈಎಸ್-1087/2013, ದಿನಾಂಕ: 24/10/2016.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 04/11/2016 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಮಾನ್ಯ ಉಪಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಸಲ್ಲಿಸಿರುವ ವರದಿಯಲ್ಲಿ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಹಾಗೂ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಇವರು ಜಕ್ಕನಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿದ್ದ ಅವಧಿಯಲ್ಲಿ 2010 ರಿಂದ 2013 ಮಾರ್ಚ್ ರವರೆಗೆ ಕಾಡೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಮಾಡಿರುವ ಹಲವಾರು ಕಾಮಗಾರಿಗಳು ಕಳಪೆ ಗುಣಮಟ್ಟದಾಗಿದ್ದು ಮತ್ತು ಎಲ್ಲಾ ಕಾಮಗಾರಿಗಳನ್ನು ಎನ್.ಆರ್.ಶೋಭಾ ಇವರ ಪತಿ ರಾಮಚಂದ್ರ ರವರ ಮೂಲಕ ಕಂಟ್ರಾಕ್ಟ್ ಮಾಡಿಸಿರುತ್ತಾರೆ ಹಾಗೂ ಸದರಿ ಗ್ರಾಮದ ಗ್ರಾಮಸ್ಥರ ಹೆಸರಿನಲ್ಲಿ ಅರ್ಜಿ ಸಲ್ಲಿಸಿ ಎಲ್ಲಾ ಗ್ರಾಮಸ್ಥರ ಸಹಿಯನ್ನು ಎನ್.ಆರ್.ಶೋಭಾ ಇವರ ಪತಿ ಶ್ರೀ ರಾಮಚಂದ್ರ ರವರ ಸಹಾಯದಿಂದ ಫೋರ್ಜರಿ ಮಾಡಿರುತ್ತಾರೆ ಎಂದು ದೂರುದಾರರಾದ ಶ್ರೀ ಕೆ.ಎನ್. ಪುಟ್ಟಸ್ವಾಮಿಗೌಡ ಬಿನ್ ಕೆ.ನರಸಿಂಹೇಗೌಡ, ಕಾಡೇನಹಳ್ಳಿ ಗ್ರಾಮ, ಕಡಲಗೆರೆ ಅಂಚೆ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ರವರು ಕರ್ನಾಟಕ ಲೋಕಾಯುಕ್ತಕ್ಕೆ ಸಲ್ಲಿಸಿರುವ ದೂರಿನಂತೆ ನಡೆಸಿದ ತನಿಖೆಯನುಸಾರ

1. "ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 12(ಹೆಚ್) ರನ್ವಯ ಗ್ರಾಮ ಪಂಚಾಯಿತಿಯ ಯಾವುದೇ ಸದಸ್ಯರಾಗಲೀ ಅಥವಾ ಅವರಿಗೆ ಸಂಬಂಧಿಸಿದವರಾಗಲೀ ಗ್ರಾಮ ಪಂಚಾಯಿತಿಯಿಂದ ಯಾವುದೇ ಗುತ್ತಿಗೆ ಕಾಮಗಾರಿಯನ್ನು ಪಡೆಯಲು ಅಥವಾ ಯಾವುದೇ ಸಾಮಗ್ರಿಯನ್ನು ಒದಗಿಸಲು ನೇರವಾಗಿ ಅಥವಾ ಪರೋಕ್ಷವಾಗಿ ಒದಗಿಸಲು ಅವಕಾಶ ಇರುವುದಿಲ್ಲ. ಒಂದು ವೇಳೆ ಒದಗಿಸಿದ್ದಲ್ಲಿ, ಅಂತಹ ಸದಸ್ಯರ ಸದಸ್ಯತ್ವವನ್ನು ಅನರ್ಹಗೊಳಿಸಲಾಗುವುದು ಎಂದು ತಿಳಿಸಲಾಗಿರುತ್ತದೆ. ಆದರೆ, ಒಂಬೂಡ್ಸ್‌ಮೆನ್ ರವರ ವರದಿಯಲ್ಲಿ ಕಾಡೇನಹಳ್ಳಿ ಗ್ರಾಮದಲ್ಲಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳಿಸಿರುವ ಎಲ್ಲಾ ಕಾಮಗಾರಿಗಳ ಸಾಮಗ್ರಿ ಸರಬರಾಜು ಬಿಲ್ಲನ್ನು ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ

ಗ್ರಾಮ ಪಂಚಾಯಿತಿ ಇವರ ಪತಿಯಾದ ಶ್ರೀ ರಾಮಚಂದ್ರ–ಗುತ್ತಿಗೆದಾರರು ರವರ ಹೆಸರಿಗೆ ನೀಡಿರುವುದು ದೃಢಪಟ್ಟಿರುತ್ತದೆಂದು ತಿಳಿಸಿರುತ್ತಾರೆ. ಇದರಿಂದ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳು ಸಹಾ ಕರ್ತವ್ಯ ಲೋಪವೆಸಗಿರುವುದು ಕಂಡುಬರುತ್ತದೆ.

2. ಶ್ರೀ ಕೆ.ಸಿ.ರೂಪೇಶ್ ರವರು ಪಾಂಡವಪುರ ಸಕ್ಕರೆ ಕಾರ್ಖಾನೆಯ ಉದ್ಯೋಗಿಯಾಗಿರುತ್ತಾರೆ. ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳಿಸಿರುವ 2011–12 ಮತ್ತು 2012–13ನೇ ಸಾಲಿನ ಮೂರು ಕಾಮಗಾರಿಗಳಲ್ಲಿ ಕೂಲಿ ಕಾರ್ಮಿಕರೆಂದು ಶ್ರೀ ಕೆ.ಎಸ್.ರೂಪೇಶ್ ಎಂಬುವವರ ಹೆಸರಿಗೆ ರೂ.7,850/– ಪಾವತಿಯಾಗಿರುತ್ತದೆ. ಆದರೆ, ಎಂ.ಎನ್.ಜಿ.ಆರ್.ಜಿ., ಯೋಜನೆಯಡಿಯಲ್ಲಿ ಕರ್ತವ್ಯ ನಿರ್ವಹಿಸಿದ ದಿನಾಂಕಗಳಂದು ಶ್ರೀ ಕೆ.ಸಿ.ರೂಪೇಶ್ ರವರು ಪಾಂಡವಪುರ ಸಕ್ಕರೆ ಕಾರ್ಖಾನೆಯಲ್ಲಿಯೂ ಸಹಾ ಕರ್ತವ್ಯ ನಿರ್ವಹಿಸಿರುವುದು ಕಾರ್ಖಾನೆಯ ಹಾಜರಾತಿ ವಹಿಯಿಂದ ದೃಢಪಟ್ಟಿರುತ್ತದೆ.

3. ಶ್ರೀ ಕೆ.ಸಿ.ರೂಪೇಶ್ ರವರು ಒಂದೇ ದಿನಾಂಕಗಳಂದು ಎರಡೂ ಕಡೆ ಕೆಲಸ ನಿರ್ವಹಿಸಿರುವುದು ದಾಖಲಾತಿಗಳಿಂದ ದೃಢಪಟ್ಟಿರುತ್ತದೆಂದು ಒಂಬುಡ್ಸ್‌ಮೆನ್ ರವರು ವರದಿಯಲ್ಲಿ ತಿಳಿಸಿ, ಸದರಿ ಮೊತ್ತ ರೂ.7,850/– ಗಳನ್ನು ವಸೂಲಾತಿ ಮಾಡಿಕೊಳ್ಳುವಂತೆ ಸೂಚಿಸಿರುತ್ತಾರೆ ವಿನಹಃ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳ ವಿರುದ್ಧ ಕಾನೂನು ರೀತ್ಯಾ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

4. ಮೇಲಿನ ಅಂಶಗಳಿಗೆ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳು ಶ್ರೀ ಕೆ.ಸಿ.ರೂಪೇಶ್ ರವರು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳಿಸಿರುವ 2011–12 ಮತ್ತು 2012–13ನೇ ಸಾಲಿನ ಮೂರು ಕಾಮಗಾರಿಗಳಲ್ಲಿ ಕೂಲಿ ಕಾರ್ಮಿಕರಾಗಿ ಕರ್ತವ್ಯ ನಿರ್ವಹಿಸಿರುವುದಾಗಿ ತಿಳಿಸಿ ಸದರಿಯವರಿಗೆ ರೂ.7,850/– ಗಳನ್ನು ನೀಡುವ ಮೂಲಕ ಕರ್ತವ್ಯ ಲೋಪವೆಸಗಿರುತ್ತಾರೆ.

5. ಎನ್.ಎಂ.ಆರ್ ಗಳಲ್ಲಿ ಕೆಲವು ಕೂಲಿ ಕಾರ್ಮಿಕರುಗಳ ಸಹಿಗಳನ್ನು ಒಬ್ಬ ವ್ಯಕ್ತಿಯೇ ಮಾಡಿರುವುದು ಕಂಡುಬಂದಿರುತ್ತದೆಂದು ಹಾಗೂ ದಾಖಲಾತಿಗಳನ್ನು ಯೋಜನೆಯ ಮಾರ್ಗಸೂಚಿಯಂತೆ ಸಮರ್ಪಕವಾಗಿ ನಿರ್ವಹಿಸದೇ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ

ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳು ಕರ್ತವ್ಯ ಲೋಪವೆಸಗಿರುತ್ತಾರೆ.

6. ಪ್ರತಿಯೊಂದು ಕಾಮಗಾರಿಗಳಿಗೆ ಪ್ರತ್ಯೇಕ ಕಡತ ನಿರ್ವಹಿಸಿದ್ದು, ಕಡತದಲ್ಲಿರಿಸಿರುವ ನಮೂನೆ 01 ರಿಂದ 10 ರವರೆಗಿನ ನಮೂನೆಗಳಲ್ಲಿ ಕೆಲವು ಅರ್ಜಿದಾರರುಗಳು ಸಹಿ ಇರುವುದಿಲ್ಲ. ಇದರಿಂದ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳು ಕರ್ತವ್ಯ ಲೋಪವೆಸಗಿರುವುದು ಕಂಡುಬಂದಿರುತ್ತದೆ.

7. ಉದ್ಯೋಗ ಚೀಟಿ ನೋಂದಣಿ ವಹಿಯಲ್ಲಿ ನೋಂದಣಿ ಸಂಖ್ಯೆಯನ್ನು ನಮೂದಿಸಿದ್ದು ಕೆಲವೊಂದು ನೋಂದಣಿ ಸಂಖ್ಯೆಗಳನ್ನು ಪೆನ್ಸಿಲ್‌ನಿಂದ ಮತ್ತು ಪೆನ್ನಿನಿಂದ ಎರಡೆರಡು ನಮೂದಿಸಿರುವುದು ಕಂಡುಬಂದಿರುತ್ತದೆ. ಮತ್ತೆ ಕೆಲವು ನಂಬರಿಗೆ ಶಾಯಿಯಲ್ಲಿ (Corection Fluid) ಉಪಯೋಗಿಸಿ, ತಿದ್ದಿರುವುದು ಕಂಡುಬಂದಿರುತ್ತದೆ. ಇದನ್ನು ಗಮನಿಸಿದಾಗ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳು ಖೋಟಾ ಹಾಗೂ ನಕಲಿ ದಾಖಲೆಗಳನ್ನು ಸೃಷ್ಟಿಸಿ ಕರ್ತವ್ಯ ಲೋಪವೆಸಗಿರುವುದು ಕಂಡುಬಂದಿರುತ್ತದೆ.

8. ಉದ್ಯೋಗ ಚೀಟಿ ವಿತರಣಾ ವಹಿಯಲ್ಲಿ ಕೆಲವೊಂದು ಕುಟುಂಬ ಉದ್ಯೋಗ ಚೀಟಿಗಳನ್ನು ವಿತರಣೆ ಮಾಡಲಾಗಿದ್ದರೂ ಉದ್ಯೋಗ ಚೀಟಿದಾರರ ಸಹಿ ಹಾಕಿಸದೇ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳು ಕರ್ತವ್ಯ ಲೋಪವೆಸಗಿರುವುದು ಕಂಡುಬಂದಿರುತ್ತದೆ.

9. ಕೆಲವು ಕುಟುಂಬ ಉದ್ಯೋಗ ಚೀಟಿಗಳಿಗೆ ಒಬ್ಬ ವ್ಯಕ್ತಿಯೇ ಸಹಿ ಮಾಡಿರುವುದನ್ನು ಗಮನಿಸಿದಾಗ ಶ್ರೀಮತಿ ಎನ್.ಆರ್.ಶೋಭಾ ಕೋಂ ಕೆ.ರಾಮಚಂದ್ರ, ಅಧ್ಯಕ್ಷರು, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರುಗಳು ನಕಲಿ ದಾಖಲೆಗಳನ್ನು ಸೃಷ್ಟಿಸಿ ವಿಶ್ವಾಸ ವಂಚನೆ ಮಾಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

ಮೇಲಿನ ಎಲ್ಲಾ ಕಾರಣಗಳಿಂದ ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (ii) ಮತ್ತು (iii)ರ ಅನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಕಂಡುಬಂದದ್ದರಿಂದ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು

ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಕರ್ನಾಟಕ ಲೋಕಾಯುಕ್ತಕ್ಕೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಮಾನ್ಯ ಉಪಲೋಕಾಯುಕ್ತರು–2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು–2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/962/ಗ್ರಾಪಂಅ/2016 ಬೆಂಗಳೂರು, ದಿನಾಂಕ:20–01–2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರು–2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು–2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಮಂಡ್ಯ ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
5. *ಕಾರ್ಯನಿರ್ವಾಹಕ ಅಧಿಕಾರಿ, ಪಾಂಡವಪುರ ತಾಲ್ಲೂಕು ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ)
6. ಶ್ರೀ ಬಿ.ವಿ.ಬಾಲಾಜಿಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ.
7. ಗಣಕ ಕೋಶ– ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.